130

17

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಡಾ: ಜಿ. ಬಸವರಾಜ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಹಾವೇರಿ ಇವರ ವಿರುದ್ಧ ದಾಖಲಾದ ಲೋಕಾಯುಕ್ತ ಟ್ರ್ಯಾಪ್ ಪ್ರಕರಣದಲ್ಲಿ ಭಾಗಿಯಾದ ಬಗ್ಗೆ ಶಿಸ್ತುಕ್ರಮ

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ:ಕೃತೋಇ 44 ಕೃಪವಿ 2010 ದಿನಾಂಕ: 12-7-2010

-0-

ಪ್ರಸ್ತಾವನೆ:-

ಮೇಲೆ ಓದಲಾದ (1)ರ ಆದೇಶದಲ್ಲಿ ಡಾ: ಜಿ. ಬಸವರಾಜ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಹಾವೇರಿ ಇವರು ಶ್ರೀ ರಾಜಶೇಖರ್ ಹನುಮಂತಪ್ಪ ಡೊಂಬರ್ ಮತ್ತೂರು, ಸವಣೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರಿಂದ ಅಕ್ರಮ ಸಂಭಾವನೆ ಪಡೆಯುತ್ತಿರುವಾಗ ಲೋಕಾಯುಕ್ತದ ಅಧಿಕಾರಿಗಳಿಗೆ ಸಿಕ್ಕಿಬಿದ್ದಿರುತ್ತಾರೆಂಬ ಆರೋಪಕ್ಕೆ ಸಂಬಂಧಿಸಿದಂತೆ ಅವರನ್ನು ಅವರ ಮೇಲಿನ ಕ್ರಿಮಿನಲ್ ಮೊಕದ್ದಮೆಯನ್ನು ಬಾಕಿಯಿರಿಸಿ ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು.

ಡಾ: ಜಿ. ಬಸವರಾಜ ಸಹಾಯಕ ಕೃಷಿ ನಿರ್ದೇಶಕರು, ಹಾವೇರಿ ಇವರನ್ನು ಅಮಾನತ್ತಿನಲ್ಲಿರಿಸಿ ಈಗಾಗಲೇ 6 ತಿಂಗಳಿಗಿಂತ ಅಧಿಕವಾಗಿರುವುದರಿಂದ ಅವರ ಅಮಾನತ್ತಿನ ಆದೇಶವನ್ನು ಪುನರ್ ಪರಿಶೀಲಿಸಿದ ಸರ್ಕಾರ ಅವರ ಮೇಲಿನ ಲೋಕಾಯುಕ್ತ ಪ್ರಕರಣವನ್ನು ಬಾಕಿಯಿರಿಸಿ ಅವರನ್ನು ಅಮಾನತ್ತಿನಿಂದ ತೆರವುಗೊಳಿಸಿ ಸೇವೆಯಲ್ಲಿ ಪುನರ್‌ಸ್ಥಾಪಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

## ಸರ್ಕಾರದ ಆದೇಶ ಸಂಖ್ಯೆ:ಕೃತೋಇ 44 ಕೃಪವಿ 2010
**ಬೆಂಗಳೂರು, ದಿನಾಂಕ:29-7-2011**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ ಡಾ: ಜಿ. ಬಸವರಾಜ ಸಹಾಯಕ ಕೃಷಿ ನಿರ್ದೇಶಕರು ಇವರನ್ನು ಅವರ ಮೇಲಿನ ಲೋಕಾಯುಕ್ತದ ಕ್ರಿಮಿನಲ್ ಮೊಕದ್ದಮೆಯನ್ನು ಬಾಕಿಯಿರಿಸಿ ಈ ಕೂಡಲೇ ಜಾರಿಗೆ ಬರುವಂತೆ ಅಮಾನತ್ತಿನಿಂದ ತೆರವುಗೊಳಿಸಲಾಗಿದೆ. ಹಾಗೂ ಸದರಿಯವರನ್ನು ಸಹಾಯಕ ಕೃಷಿ ನಿರ್ದೇಶಕರು ಮುಂಡರಗಿ, ಗದಗ ಜಿಲ್ಲೆ ಇಲ್ಲಿ ಖಾಲಿಯಿರುವ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕಪತ್ರ ತಪಾಸಣೆ) ಕರ್ನಾಟಕ ಬೆಂಗಳೂರು

...2.

27

2) ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು.
3) ಜಂಟಿ ಕೃಷಿ ನಿರ್ದೇಶಕರು, ಗದಗ
4) ಸಹಾಯಕ ಕೃಷಿ ನಿರ್ದೇಶಕರು, ಮುಂಡರಗಿ ತಾಲ್ಲೂಕು ಗದಗ ಜಿಲ್ಲೆ
5) ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
6) ಸಂಬಂಧಪಟ್ಟ ಅಧಿಕಾರಿಗೆ (ಕೃಷಿ ಆಯುಕ್ತರ ಮೂಲಕ)
7) ಕಾರ್ಯದರ್ಶಿಗಳು, ಕೃಷಿ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ
8) ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ ಇವರ ಆಪ್ತ ಸಹಾಯಕರಿಗೆ
9) ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.